**Bangalore**
**Regional News**
**02.01.2026 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಬಳ್ಳಾರಿ ಘಟನೆ; ತನಿಖೆ ನಡೆಸಿ ವರದಿ ನೀಡಲು ಮುಖ್ಯಮಂತ್ರಿ ಸೂಚನೆ
2. ಇ–ಸ್ವತ್ತು ತಂತ್ರಾಂಶದಲ್ಲಿ ಮಾರ್ಪಾಡು; ಸಮಸ್ಯೆ ಪರಿಹಾರಕ್ಕೆ ಕ್ರಮ –ಸಚಿವ ಪ್ರಿಯಾಂಕ್ ಖರ್ಗೆ
3. ಬೆಂಗಳೂರಿನ ಕೈಗಾರಿಕೆಗಳಿಗೆ ಉತ್ತಮ ಗುಣಮಟ್ಟದ ಸಂಸ್ಕರಿಸಿದ ಆಲ್ಟ್ರಾ ಪ್ಯೂರ್ ನೀರು
4. ಸೂರ್ಯಕಾಂತಿ, ಸೋಯಾಬೀನ್, ದ್ವಿದಳಧಾನ್ಯ ಬೆಂಬಲ ಬೆಲೆ ಖರೀದಿ ಅವಧಿ ವಿಸ್ತರಣೆ

***************

ಬಳ್ಳಾರಿಯಲ್ಲಿ ಮಾಜಿ ಸಚಿವ ಜನಾರ್ಧನ ರೆಡ್ಡಿಯವರ ನಿವಾಸದ ಸಮೀಪ ನಡೆದ ಗುಂಪು ಘರ್ಷಣೆಯ ಬಗ್ಗೆ ತನಿಖೆ ನಡೆಸಿ ವರದಿ ನೀಡಲು ಸೂಚನೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿಯಲ್ಲಿ ಮಾಜಿ ಸಚಿವ ಜನಾರ್ಧನ ರೆಡ್ಡಿಯವರ ನಿವಾಸದ ಸಮೀಪ ನಡೆದ ಗುಂಪುಘರ್ಷಣೆಯಲ್ಲಿ ಓರ್ವ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರನ ಸಾವು ಸಂಭವಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಪ್ರಕರಣದ ತನಿಖೆಗೆ ಈಗಾಗಲೇ ಸೂಚನೆ ನೀಡಲಾಗಿದ್ದು, ಘಟನೆಯಲ್ಲಿ ಬಳಸಲಾದ ಗನ್ ಯಾರಿಗೆ ಸೇರಿದ್ದು ಎಂಬ ಬಗ್ಗೆಯೂ ತನಿಖೆ ನಡೆಸಿ ವರದಿ ನೀಡಲು ಸೂಚಿಸಲಾಗಿದೆ. ಸತೀಶ್ ರೆಡ್ಡಿಯವರು ಗಾಳಿಯಲ್ಲಿ ಗುಂಡು ಹಾರಿಸಲು ಹೋಗಿ ರಾಜಶೇಖರ ಅವರಿಗೆ ತಗುಲಿರಬಹುದು, ಆದ್ದರಿಂದ ಈ ಬಗ್ಗೆ ತನಿಖೆ ನಡೆಯಬೇಕಿದೆ ಎಂದರು.

***************

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ – ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು ನಿಯಮಗಳು, 2025 ಅನ್ನು ಅಧಿಸೂಚಿಸಲಾಗಿದ್ದು, ಈ ನಿಯಮಗಳನ್ವಯ, ಈ ಹಿಂದೆ ಇದ್ದ ಇ–ಸ್ವತ್ತು ತಂತ್ರಾಂಶವನ್ನು ಮಾರ್ಪಡಿಸಿ ಚಾಲನೆಗೊಳಿಸಲಾಗಿದೆ.

ತಂತ್ರಾಂಶದಲ್ಲಿ ಈವರೆಗೂ ಒಟ್ಟು 8 ಸಾವಿರದ 886 ಅರ್ಜಿಗಳನ್ನು ಆನ್‌ಲೈನ್ ಮೂಲಕ ಸ್ವೀಕರಿಸಲಾಗಿದ್ದು, ತಂತ್ರಾಂಶ ಸಿದ್ಧಪಡಿಸಿರುವ ಎನ್.ಐ.ಸಿ ತಂತ್ರಾಂಶದ ದೋಷದಿಂದಾಗಿ ಕೆಲವೊಂದು ಅರ್ಜಿಗಳನ್ನು ಸಲ್ಲಿಸುವಾಗ ತಾಂತ್ರಿಕ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಅವುಗಳನ್ನು ಸರಿಪಡಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಅನುಕೂಲವಾಗುವಂತೆ ಇ–ಸ್ವತ್ತು ತಂತ್ರಾಂಶವನ್ನು ನಿಯಮಗಳನ್ವಯ ಮಾರ್ಪಡು ಮಾಡಲಾಗಿದ್ದು, ಸಾರ್ವಜನಿಕರಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಲಾಗಿನ್ ಸೃಜಿಸಲಾಗಿರುತ್ತದೆ. ಇ–ಸ್ವತ್ತು 2.0 ತಂತ್ರಾಂಶವನ್ನು ಭೂಮಿ, ಕಾವೇರಿ, ಪಂಚತಂತ್ರ, ಮೋಜಿಣಿ, ಹಾಗೂ ಎಸ್ಕಾಂಗಳ ತಂತ್ರಾಂಶಗಳೊಂದಿಗೆ ಸಂಯೋಜಿಸಲಾಗಿರುತ್ತದೆ. ಸದರಿ ಸಂಯೋಜನೆಯಿಂದ ತಾಂತ್ರಿಕ ಸಮಸ್ಯೆಗಳು ಉಂಟಾಗಿವೆ ಎಂದು ಸಚಿವರು ಹೇಳಿದ್ದಾರೆ.

ನಿಯಮಗಳಿಗೆ ಹಾಗೂ ಇ–ಸ್ವತ್ತು ತಂತ್ರಾಂಶದ ಬಳಕೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಸಹಾಯಕ್ಕಾಗಿ ಇಲಾಖೆಯಿಂದ ಸಹಾಯವಾಣಿ – 9483476000 ಪ್ರಾರಂಭಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ಮನೆಗಳಿಗೆ ಕಾವೇರಿ, ಕೈಗಾರಿಕೆಗಳಿಗೆ ಆಲ್ಟ್ರಾ ಪ್ಯೂರ್ ಸಂಸ್ಕರಿಸಿದ ನೀರು ಎಂಬ ಧ್ಯೇಯವಾಕ್ಯದೊಂದಿಗೆ, ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಆಲ್ಟ್ರಾ ಪ್ಯೂರ್ ವಾಟರ್ ಸಂಸ್ಕರಿಸಿದ ನೀರನ್ನು ಪೂರೈಸಲು ಬೆಂಗಳೂರು ಜಲಮಂಡಳಿ ಟೆಂಡರ್ ಕರೆದಿದೆ ಎಂದು ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಅಧ್ಯಕ್ಷರಾದ ಡಾ ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶವಾಗಿರುವ ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಅಡೆತಡೆಯಿಲ್ಲದೆ ಉತ್ತಮ ಗುಣಮಟ್ಟದ ಸಂಸ್ಕರಿಸಿದ ಆಲ್ಟ್ರಾ ಪ್ಯೂರ್ ನೀರನ್ನು ಸರಬರಾಜು ಮಾಡುವ ಉದ್ದೇಶದಿಂದ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆಗಳ ಅಭಿವೃದ್ದಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕಡಿಮೆ ದರದಲ್ಲಿ ಉತ್ತಮ ನೀರು ಒದಗಿಸುವುದು ಇದರ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

ಈ ಯೋಜನೆಯ ಪ್ರಮುಖ ವಿಶೇಷತೆಯೆಂದರೆ ಪೂರೈಕೆಯಾಗುವ ನೀರಿನ ಗುಣಮಟ್ಟ. ನಾಗಸಂದ್ರ ತ್ಯಾಜ್ಯ ನೀರು ಸಂಸ್ಕರಣಾ ಘಟಕದಿಂದ ಪಡೆಯಲಾಗುವ 4 ಎಂಎಲ್‌ಡಿ ನೀರನ್ನು ಅತ್ಯಾಧುನಿಕ ತಂತ್ರಜ್ಞಾನದಲ್ಲಿ ಸಂಸ್ಕರಿಸಲಾಗುತ್ತದೆ. ಅಲ್ಲದೇ ಈ ತ್ಯಾಜ್ಯ ನೀರನ್ನು ಅಲ್ಟ್ರಾ ಪ್ಯೂರ್ ವಾಟರ್ ಗುಣಮಟ್ಟಕ್ಕೆ ಶುದ್ಧೀಕರಿಸಿ ಈ ನೀರು ಸರಬರಾಜು ಮಾಡಲಾಗುವುದು ಎಂದರು.

ಉತ್ಪಾದನಾ ಪ್ರಕ್ರಿಯೆಯನ್ನು ಹೊರತುಪಡಿಸಿ, ಇತರೆ ಉದ್ದೇಶಗಳಿಗೆ ಈ ಉನ್ನತ ಗುಣಮಟ್ಟದ ಅಲ್ಟ್ರಾ ಪ್ಯೂರ್ ಸಂಸ್ಕರಿಸಿದ ನೀರನ್ನು ಬಳಸುವುದರಿಂದ ಲಕ್ಷಾಂತರ ಲೀಟರ್ ಶುದ್ಧ ಕಾವೇರಿ ನೀರನ್ನು ಉಳಿಸಿ, ಅದನ್ನು ಬೆಂಗಳೂರಿನ ಮನೆಗಳಿಗೆ ಒದಗಿಸಲು ಸಾಧ್ಯವಾಗುತ್ತದೆ.

***************

ಕಲಬುರಗಿ ಜಿಲ್ಲೆಯ ರೈತರ ಅನುಕೂಲಕ್ಕಾಗಿ ಹೆಸರು, ಉದ್ದು, ಸೂರ್ಯಕಾಂತಿ ಹಾಗೂ ಸೋಯಾಬಿನ್ ಖರೀದಿ ಅವಧಿ ವಿಸ್ತರಣೆ ಮಾಡಲಾಗಿದೆ.

ಪ್ರಸಕ್ತ ಸಾಲಿನ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು, ಉದ್ದಿನಕಾಳು, ಸೂರ್ಯಕಾಂತಿ ಹಾಗೂ ಸೋಯಾಬಿನ್ ಉತ್ಪನ್ನವನ್ನು ರೈತರಿಂದ ಖರೀದಿಸಲು ನಿಗದಿಪಡಿಸಿರುವ ಗರಿಷ್ಠ ಮಿತಿಯನ್ನು ತೆಗೆದು FRUITS ತಂತ್ರಾಂಶದಲ್ಲಿ ಲಭ್ಯವಿರುವ ರೈತರ ಬೆಳೆಯ ಮಾಹಿತಿ ಆಧಾರದ ಮೇಲೆ ಎಕರೆಗೆ ಅನುಗುಣವಾಗಿ ಖರೀದಿಸಲು ಆದೇಶಿಸಲಾಗಿದೆ.

ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಂಡು ತಮ್ಮ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹಾಗೂ FPO ಗಳಿಗೆ ಭೇಟಿ ನೀಡಿ ತಾವು ಬೆಳೆದ ಹೆಸರು ಕಾಳು, ಉದ್ದಿನ ಕಾಳು, ಸೂರ್ಯಕಾಂತಿ ಹಾಗು ಸೋಯಾಬೀನ ನಿಗದಿತ ಅವಧಿಯಲ್ಲಿ ಮಾರಾಟ ಮಾಡಬಹುದಾಗಿದೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ರಾಜ್ಯ ವನ್ಯಜೀವಿ ಮಂಡಳಿಯ ಸಭೆ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ನಡೆಯಿತು. ಸಭೆಯಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಸಚಿವರುಗಳಾದ ಈಶ್ವರ ಖಂಡ್ರೆ, ಭೈರತಿ ಸುರೇಶ್, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್,

ಕರ್ನಾಟಕ ರಾಜ್ಯ ಅರಣ್ಯ ಮತ್ತು ವನ್ಯಜೀವಿ ರಾಯಭಾರಿ ಅನಿಲ್ ಕುಂಬ್ಳೆ, ಮುಖ್ಯ ವನ್ಯಜೀವಿ ಪರಿಪಾಲಕ ಪಿ.ಸಿ. ರೇ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

***************

ಹೆಚ್ಚುತ್ತಿರುವ ರಸ್ತೆ ಅಪಘಾತಗಳಿಂದ ಸಾವಿನ ಸಂಖ್ಯೆಯಲ್ಲಿಯೂ ಗಣನೀಯ ಏರಿಕೆ ಕಂಡು ಬರುತ್ತಿದ್ದು, ರಸ್ತೆ ಅಪಘಾತಗಳನ್ನು ತಡೆಯಲು ಸಂಚಾರ ನಿಯಮಗಳನ್ನು ಪಾಲಿಸುವ ಜೊತೆಗೆ ಜಾಗರೂಕತೆಯ ವಾಹನ ಚಾಲನೆ ಅತ್ಯಗತ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಟಿ.ಪಿ.ರಾಮಲಿಂಗೇಗೌಡ ಸಲಹೆ ಮಾಡಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಸಾರಿಗೆ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಜಿಲ್ಲಾ ನ್ಯಾಯಾಲಯದ ಮುಂಭಾಗದಲ್ಲಿ ಹಮ್ಮಿಕೊಂಡಿದ್ದ 'ರಸ್ತೆ ಸುರಕ್ಷತಾ ಸಪ್ತಾಹ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ರಸ್ತೆಗಳಲ್ಲಿ ಸುರಕ್ಷಿತ ಮತ್ತು ಜಾಗರೂಕತೆಯ ವಾಹನ ಚಾಲನೆ ಅತಿ ಮುಖ್ಯ. ಅದರಲ್ಲೂ ದ್ವಿಚಕ್ರವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಬೇಕು.

***************

ಕೈಮಗ್ಗ ಉತ್ತೇಜನಕ್ಕೆ ಪೂರಕವಾದ ಅಂಶಗಳನ್ನು ನೂತನ ಜವಳಿ ನೀತಿಯಲ್ಲಿ ಅಳವಡಿಸಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ.

ಬೆಂಗಳೂರಿನ ಮಹಾಲಕ್ಷ್ಮಿಪುರಂನ ರಾಣಿ ಅಬ್ಬಕ್ಕ ಮೈದಾನದಲ್ಲಿ ಆಯೋಜಿಸಿರುವ 15 ದಿನಗಳ ರಾಷ್ಟ್ರೀಯ ಕೈಮಗ್ಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೇಕಾರ ಸಮ್ಮಾನ್ ಯೋಜನೆಯಲ್ಲಿ ನೀಡುತ್ತಿದ್ದ 2 ಸಾವಿರ ರೂಪಾಯಿ ಆರ್ಥಿಕ ನೆರವನ್ನು ರಾಜ್ಯ ಸರ್ಕಾರ 5 ಸಾವಿರ ರೂಪಾಯಿಗಳಿಗೆ ಹೆಚ್ಚಳ ಮಾಡಿದ್ದು, 2024-25ನೇ ಸಾಲಿನಲ್ಲಿ 1 ಲಕ್ಷದ 17 ಸಾವಿರದ 459 ನೇಕಾರರ ಬ್ಯಾಂಕ್

ಖಾತೆಗಳಿಗೆ 58 ಕೋಟಿ 69 ಲಕ್ಷ ರೂಪಾಯಿಗಳನ್ನು ಜಮಾ ಮಾಡಲಾಗಿದೆ. ಹೊಸತನ ಅಳವಡಿಸಿಕೊಂಡರೆ ಮಾತ್ರ ಕೈಮಗ್ಗ ಉದ್ಯಮಕ್ಕೆ ಭವಿಷ್ಯ ಇದೆ. ಈ ನಿಟ್ಟಿನಲ್ಲಿ ಪೂರಕ ಅಂಶಗಳನ್ನು ಜವಳಿ ನೀತಿಯಲ್ಲಿ ಸೇರ್ಪಡೆ ಮಾಡಲಾಗುವುದು ಎಂದು ಹೇಳಿದರು.

***************

ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಸಂಚಾರಿ ಅಕ್ಕ ಕ್ಯಾಂಟಿನ್‌ಗೆ ಹಂಪಿಯ ವಿಜಯ ವಿಠಲ ದೇವಸ್ಥಾನದ ಮುಂಭಾಗದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ ಚಾಲನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶ್ವ ವಿಖ್ಯಾತ ಹಂಪಿ ಹಾಗೂ ವಿಜಯ ವಿಠಲ ದೇವಸ್ಥಾನ ವೀಕ್ಷಣೆಗೆ ವಿವಿಧ ರಾಜ್ಯ ಸೇರಿದಂತೆ ವಿದೇಶಿ ಪ್ರವಾಸಿಗರು ಹೆಚ್ಚಿನ ಪ್ರಮಾಣದಲ್ಲಿ ಆಗಮಿಸುತ್ತಿರುವ ಹಿನ್ನಲೆಯಲ್ಲಿ ದೇವಸ್ಥಾನ ವೀಕ್ಷಣೆ ಹಾಗೂ ದೇವರ ದರ್ಶನ ಪಡೆಯಲು ಬರುವ ಗ್ರಾಮೀಣ ಪ್ರದೇಶದ ಸಾರ್ವಜನಿಕರ ಅನುಕೂಲಕ್ಕಾಗಿ ಹಂಪಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿಜಯ ವಿಠಲ ದೇವಸ್ಥಾನ ಮುಂಭಾಗದಲ್ಲಿ ಮೊಬೈಲ್ ಕ್ಯಾಂಟಿನ್ ವ್ಯವಸ್ಥೆ ಕಲ್ಪಿಸಲಾಗಿದೆ.

ಮೊಬೈಲ್ ಕ್ಯಾಂಟಿನ್‌ನಲ್ಲಿ ತೊಡಗಿರುವ ಗ್ರಾಮೀಣ ಭಾಗದ ಸ್ವಸಹಾಯ ಗುಂಪಿನ ಮಹಿಳೆಯರ ಕುಟುಂಬಗಳಿಗೆ ಆದಾಯ ವೃದ್ಧಿಯಾಗಿ ಆರ್ಥಿಕವಾಗಿ ಸದೃಢರಾಗಲು  ಅನುಕೂಲ ವಾಗುತ್ತದೆ ಎಂದರು.

***************

ಮಂಡ್ಯ ನಗರದಲ್ಲಿ ಹೆಚ್ಚಿನ ವಾಹನದಟ್ಟಣೆ ನಿರ್ವಹಿಸಲು ಮಂಡ್ಯ ದಕ್ಷಿಣ ಭಾಗಕ್ಕೆ ಬೈಪಾಸ್ ರಿಂಗ್ ರೋಡ್ ಪ್ರಸ್ತಾವನೆ ಇರುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ವಾಹನ ದಟ್ಟಣೆಯ ಕುರಿತು ಅಧ್ಯಯನ ನಡೆಸಿ ವರದಿ ನೀಡಲು ಎಫ್.ಪಿ ಪ್ರಾಜೆಕ್ಟ್ ಮ್ಯಾನೇಜ್ಮೆಂಟ್ ಸಂಸ್ಥೆಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದ್ದಾರೆ.

******* ಮುಕ್ತಾಯ *******